ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ಸರ್ಕಾರಿ ಪ್ರಾಥಮಿಕ ಶಾಲೆಗಳ ಸ್ಥಿತಿಗತಿಗಳ ಕುರಿತು

ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು):-

996 (1231) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಪ್ರಾಥಮಿಕ ಶಾಲೆಗಳ ಸಂಖ್ಯೆ ಎಷ್ಟು; ಪ್ರತಿ ಶಾಲೆಗಳಲ್ಲಿ ಅಭ್ಯಾಸ ಮಾಡುತ್ತಿರುವ ಬಾಲಕ/ಬಾಲಕಿಯರ ಸಂಖ್ಯೆ ಎಷ್ಟು; (ಜಿಲ್ಲಾವಾರು/ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಶಾಲೆಗಳಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ; ಎಷ್ಟು ಶಾಲೆಗಳಲ್ಲಿ ಒದಗಿಸಲಾಗಿದೆ; ಹಾಗೂ ಎಷ್ಟು ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಿರುವುದಿಲ್ಲ; (ವಿವರ ನೀಡುವುದು)

(ಇ) ಇವುಗಳಲ್ಲಿ ಈವರೆಗೂ ಎಷ್ಟು ಶಾಲೆಗಳನ್ನು ಮುಚ್ಚಲಾಗಿದೆ; ಹಾಗೂ ಎಷ್ಟು ಶಾಲೆಗಳು ಮುಚ್ಚುವ ಹಂತದಲ್ಲಿವೆ;

(ಈ) ಈ ಬಗ್ಗೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ? (ಸಂಪೂರ್ಣ ವಿವರ ನೀಡುವುದು)